ಪ್ರಸ್ತಾವವು ಅಂಗೀಕೃತವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):– ಮಾನ್ಯ ಉಪಾಧ್ಯಕ್ಷರೆ, 2014ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು:– ಮಂಡಿಸಲಾಗಿದೆ.

(ಅನುಬಂಧ–1)

2) ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ, 2014

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು):– ಮಾನ್ಯ ಉಪಾಧ್ಯಕ್ಷರೆ, 2014 ನೇ ಸಾಲಿನ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು:– ಪ್ರಸ್ತಾವನೆಯನ್ನು ಮಂಡಿಸಲಾಯಿತು. ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ "2014 ನೇ ಸಾಲಿನ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ವಿನಯ ಕುಮಾರ್ ಸೊರಕೆ:– (ಮಾನ್ಯ ನಗರಾಭಿವೃದ್ಧಿ ಸಚಿವರು):– ಮಾನ್ಯ ಉಪಾಧ್ಯಕ್ಷರೆ, 2014ರ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು:– ಮಂಡಿಸಲಾಗಿದೆ.

(ಅನುಬಂಧ–2)

4. ವಿತ್ತೀಯ ಕಾರ್ಯಕಲಾಪಗಳು

2014–2015 ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ

ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಮೇಲುಕೋಟೆ):– ಮಾನ್ಯ ಉಪಾಧ್ಯಕ್ಷರೆ, ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳು 2014–15 ನೇ ಸಾಲಿನ 1 ಲಕ್ಷದ 36 ಸಾವಿರ ಕೋಟಿ ರೂ.ಗಳ ಆಯವ್ಯಯವನ್ನು ಮಂಡನೆ ಮಾಡಿದ್ದಾರೆ. ವಿರೋಧ ಪಕ್ಷಗಳು ಮತ್ತು ಆಡಳಿತ ಪಕ್ಷಗಳು ಮತ್ತು ಆಡಳಿತ ಪಕ್ಷಗಳು ಬಹಳ ದೊಡ್ಡ ಚರ್ಚೆಯನ್ನು ಮಾಡಿ ಪರ ಮತ್ತು ವಿರೋಧವಾಗಿ ಮಾತನಾಡಿದ್ದಾರೆ. ಆದರೆ ನಾನೊಬ್ಬ ಹೋರಾಟಗಾರನಾಗಿ, ಚಳುವಳಿಯ ಹಿನ್ನೆಲೆಯಿಂದ ಬಂದಿರುವುದರಿಂದ ನನ್ನ ಅನಿಸಿಕೆ ಮತ್ತು ಆಲೋಚನೆಗಳು ಬೇರೆ ಬೇರೆ ಇದೆ. ಇದು ಕೆಲವು ಅಂಶಗಳು ಪೂರಕವಾಗಿದೆ. ಕೆಲವು ಅಂಶಗಳನ್ನು ಅತ್ಯಂತ ಗಂಭೀರವಾಗಿ ಆಲೋಚನೆಯನ್ನು ಮಾಡಿದ್ದೇನೆ. ಆದುದರಿಂದ ಮೊದಲು ಸರ್ಕಾರ ಒಂದು ಕಟಿಬದ್ಧವಾಗಿರಬೇಕಾಗಿತ್ತು.